ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ನೇವಿ-1/ಅಉಆ/97/2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ,
ಶೇಷಾದ್ರಿ ರಸ್ತೆ, ಬೆಂಗಳೂರು-01,
ದಿನಾಂಕ:18-03-2022

## ಪ್ರಕಟಣೆ

ವಿಷಯ: 2021-22ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಇದೇ ಕ್ರಮಾಂಕದ ಸುತ್ತೋಲೆ ದಿನಾಂಕ:17.01.2022 ಮತ್ತು ದಿನಾಂಕ:28.01.2022.

* * * * * * *

2021-22ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಯಂ ಉಪನ್ಯಾಸಕರಿಗೆ ಕಾರ್ಯಭಾರ ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಬೋಧನಾ ಕಾರ್ಯಭಾರಕ್ಕೆ ಉಲ್ಲೇಖಿತ ದಿನಾಂಕ:17.01.2022 ರ ಈ ಕಛೇರಿಯ ಸುತ್ತೋಲೆಯಂತೆ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಪಡೆದು, ವಿಷಯವಾರು ರಾಜ್ಯವಾಪಿ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಸಿದ್ಧಪಡಿಸಿ, ಲಭ್ಯವಿರುವ ಕಾರ್ಯಭಾರಕ್ಕನುಗುಣವಾಗಿ ವಿವಿಧ ವಿಷಯಗಳ ರಾಜ್ಯವಾಪಿ ತಾತ್ಕಾಲಿಕ ಆಯ್ಕೆಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ನಡೆಸಲಾಗಿದ್ದ ಆನ್‌ಲೈನ್ ಕೌನ್ಸಿಲಿಂಗ್‌ನಲ್ಲಿ ಅಭ್ಯರ್ಥಿಗಳು ಅವರು ಆಯ್ಕೆ ಮಾಡಿಕೊಂಡ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರ ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುತ್ತಾರೆ.

ಮುಂದುವರೆದು, **ಗ್ರಂಥಾಲಯ ವಿಜ್ಞಾನ ಹಾಗೂ ದೈಹಿಕ ಶಿಕ್ಷಣ ವಿಷಯಗಳನ್ನು Optional / Core Subject ಆಗಿ ಬೋಧಿಸುತ್ತಿರುವ ಕಾಲೇಜುಗಳಲ್ಲಿ** ಸದರಿ ವಿಷಯಗಳ ಬೋಧನೆಗೆ ಅವಶ್ಯವಿರುವ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಬೇಕಾಗಿದ್ದು, ಈ ಸಂಬಂಧ ದಿನಾಂಕ:22/03/2022 ರಂದು Online Councelling ಅನ್ನು ಏರ್ಪಡಿಸಲಾಗಿದೆ.

ಗ್ರಂಥಾಲಯ ವಿಜ್ಞಾನ ಹಾಗೂ ದೈಹಿಕ ಶಿಕ್ಷಣ ವಿಷಯಗಳ ಬೋಧನೆಗೆ ಈ ಹಿಂದೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕಾರ್ಯ ನಿರ್ವಹಿಸಿದವರನ್ನು ಮಾತ್ರ ಆಯ್ಕೆ ಮಾಡಿಕೊಳ್ಳಬೇಕಾಗಿರುವುದರಿಂದ ಈ ಪ್ರಕಟಣೆಗೆ ಲಗತ್ತಿಸಿರುವ ತಾತ್ಕಾಲಿಕ ಅಭ್ಯರ್ಥಿಗಳ ಪಟ್ಟಿಯಲ್ಲಿ **ಈ ಹಿಂದೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಕಾರ್ಯನಿರ್ವಹಿಸಿದ್ದ ಅಭ್ಯರ್ಥಿಗಳು ಮಾತ್ರ Online Councelling ನಲ್ಲಿ ಭಾಗವಹಿಸುವುದು**.

ಕಾಲೇಜುಗಳಲ್ಲಿ ಗ್ರಂಥಾಲಯ ವಿಜ್ಞಾನ ಹಾಗೂ ದೈಹಿಕ ಶಿಕ್ಷಣ ವಿಷಯದ ಬೋಧನೆಗೆ ಲಭ್ಯವಿರುವ ಕಾರ್ಯಭಾರದ ವಿವರಗಳನ್ನು (ತಾತ್ಕಾಲಿಕ ಪಟ್ಟಿ) ಈ ಸುತ್ತೋಲೆಯೊಂದಿಗೆ ಮಾಹಿತಿಗಾಗಿ ಲಗತ್ತಿಸಿದೆ. Online Councelling ವೇಳಾಪಟ್ಟಿ ಮತ್ತು ಗೂಗಲ್ ಮೀಟ್ ಲಿಂಕ್ ಗಳನ್ನು ಇಲಾಖೆಯ ವೆಬ್ಸೈಟ್ https://dce.karnataka.gov.in/ ನ Guest Faculty Selection page ನಲ್ಲಿ ಪ್ರಕಟಿಸಲಾಗುವುದು.

R. Nagesha

**ನಿರ್ದೇಶಕರು**
ಕಾಲೇಜು ಶಿಕ್ಷಣ ಇಲಾಖೆ